ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 35/2025**

ಚಾ.ಸಾ. **:- 03**
ಪ್ರಾ.ಸಾ. **:- 03**

| | | |
|---|---|---|
| ಹೆಸರು | : | ಬೀರೇಶ್ |
| ತಂದೆಯ ಹೆಸರು | : | ಮರೀಗೌಡ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಗಣಂಗೂರು ಗ್ರಾಮ. |

ಪ್ರಮಾಣೀಕರಿಸಲಾದ ದಿನಾಂಕಃ- **21.07.2026.**

<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>

ಚಾ.ಸಾ-1, 2 ಮತ್ತು 4 ರವರು ಪರಿಚಯ, ನಮ್ಮ ಊರಿನವರು. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ಸ್ಥಳ ಮಹಜರ್ ಮಾಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ.

ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ.

**ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ರೂ.500/- ಖರ್ಚಿನ ಸಮೇತ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**